**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

## ಓ.ಎಸ್ ಸಂಖ್ಯೆ: 151/2023

| | | |
|---|---|---|
| ಸಾಕ್ಷಿದಾರರ ಹೆಸರು | : | ನೇತ್ರಾವತಿ |
| ಗಂಡನ ಹೆಸರು | : | ಕುಮಾರಸ್ವಾಮಿ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಖಾಸಗಿ ಆಸ್ಪತ್ರೆಯ ಉದ್ಯೋಗಿ |
| ವಾಸಸ್ಥಳ | : | ಅಳಗಂಚಿ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕ 20.03.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎನ್.ಯು, ವಕೀಲರಿಂದಃ**

1 ನೇ ವಾದಿ ನನ್ನ ತಂದೆ ಮತ್ತು 2 ನೇ ವಾದಿ ನನ್ನ ಅತ್ತೆಯಾಗಿದ್ದು, ನನ್ನ ಪರವಾಗಿ ಒಂದು ಸಾಮಾನ್ಯ ವಿಶೇಷ ಮುಖ್ತ್ಯಾರ್ ನಾಮೆಯನ್ನು ಬರೆದುಕೊಟ್ಟಿರುತ್ತಾರೆ. ಆದ್ದರಿಂದ ನಾನು ಈ ಪ್ರಕರಣದಲ್ಲಿ ವಾದಿಗಳ ಮುಖ್ತ್ಯಾರ್ ನಾಮೆದಾರನಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ವಾದಿಗಳು ಬರೆದುಕೊಟ್ಟಿರುವ ಸಾಮಾನ್ಯ ಮುಖ್ತ್ಯಾರ್ ನಾಮೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ದಿನಾಂಕ 25.05.1961 ರ ಅಡಮಾನ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಋಣಭಾರ ರಾಹಿತ್ಯ ಪ್ರಮಾಣಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

1 ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ವಂಶವೃಕ್ಷ ವಿವರವುಳ್ಳ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

2 ಪುಟಗಳುಳ್ಳ ಋಣಭಾರ ರಾಹಿತ್ಯ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಆಕಾರ್ ಬಂದ್ ನ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಸಣ್ಣಮ್ಮ ಮತ್ತು ರಂಗಮ್ಮರವರ ಮರಣ ಪ್ರಮಾಣಪತ್ರಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿಪಿ-9 ಮತ್ತು 10 ಎಂದು ಗುರುತಿಸಲಾಯಿತು.

ಲೀಗಲ್ ನೋಟಿಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

3 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ 14 ಎಂದು ಗುರುತಿಸಲಾಯಿತು.

**ಪಿ.ಡಬ್ಲ್ಯು-01**

**ಪಾಟೀಸವಾಲುಃ ಪ್ರತಿವಾದಿಗಳ ಪರ ವಕೀಲರು ಸಮಯ ಕೋರಿರುತ್ತಾರೆ, ಸಮಯ ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,**

**ನಂಜನಗೂಡು.**